# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 30-03-2021 ಪ್ರಶ್ನೆ ಸಂಖ್ಯೆ : 2064(2457)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಅರವಿಂದ ಕುಮಾರ್ ಅರಳಿ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 30-03-2021

ಉತ್ತರಿಸುವ ಸಚಿವರು: ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು

ವಿಷಯ : ಬೀದರ್ ಜಿಲ್ಲೆಯಾದ್ಯಂತ ತ್ಯಾಜ್ಯ ಸಂಸ್ಕರಣೆಯಾಗದಿರುವ ಬಗ್ಗೆ

(ಅ) ಬೀದರ್ ಜಿಲ್ಲೆಯ ಸಂಸ್ಕರಣಾ ಘಟಕದಲ್ಲಿ ನಗರಸಭೆ ಸೇರಿದಂತೆ ಜಿಲ್ಲೆಯ ಯಾವುದೇ ಸ್ಥಳೀಯ ಸಂಸ್ಥೆಗಳಲ್ಲೂ ತ್ಯಾಜ್ಯ ಸಂಸ್ಕರಣೆ ನಿಯಮ ಪಾಲನೆಯಾಗದಿರುವುದು ನಿಜವೇ;

(ಆ) ಜಿಲ್ಲೆಯ ನಗರಸಭೆ ವ್ಯಾಪ್ತಿಯಲ್ಲಿ ಪ್ರತಿನಿತ್ಯ ಸಂಗ್ರಹವಾಗುತ್ತಿರುವ ಎಷ್ಟು ಘನತ್ಯಾಜ್ಯ ಹಾಗೂ ಅದನ್ನು ವೈಜ್ಞಾನಿಕ ರೀತಿಯಲ್ಲಿ ಪುನರ್ ಬಳಕೆ ಮಾಡುವ ಮತ್ತು ವಿಲೇವಾರಿ ಮಾಡುವ ಯೋಜನೆ ಇದೆಯೇ; (ವಿವರ ನೀಡುವುದು)

(ಇ) ಈ ರೀತಿ ಸಂಗ್ರಹವಾದ ತ್ಯಾಜ್ಯವನ್ನು ಭೂಮಿಗೆ ಹಾಕಬಾರದೆಂದು 2005ರಲ್ಲಿ ನಿಯಮ ರೂಪಿಸಿದ್ದರೂ ಇದನ್ನು ಲೆಕ್ಕಿಸದೆ ಕಸವನ್ನು ಗುಂಡಿಗೆ ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ನಿಲ್ಲಿಸಲು ಸರ್ಕಾರ ಕೈಗೊಂಡಿರುವ ಕ್ರಮ ಏನು;

(ಈ) ಜಿಲ್ಲೆಯ ನಗರಸಭೆ ಮತ್ತು ಪುರಸಭೆಗಳು, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ತ್ಯಾಜ್ಯ ಸಂಗ್ರಹಣೆಯಾಗುತ್ತಿದ್ದು, ಇದರ ವಿಲೇವಾರಿ ಮತ್ತು ಪುನರ್ ಬಳಕೆಗೆ ಸರ್ಕಾರ ಕೈಗೊಂಡಿರುವ ಕ್ರಮವೇನು?